# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1379
2. ಸದಸ್ಯರ ಹೆಸರು : ಡಾ. ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 16.03.2026
4. ಉತ್ತರಿಸಬೇಕಾದ ಸಚಿವರು : ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಕ್ಯಾನ್ಸರ್ ಖಾಯಿಲೆ ಇಂದು ಮನುಕುಲಕ್ಕೆ ದೊಡ್ಡ ಸವಾಲಾಗಿದ್ದು, ಖಾಯಿಲೆಗೆ ತುತ್ತಾದವರುಗಳು ಸರ್ಕಾರಿ ಸ್ವಾಮ್ಯ ಸಂಸ್ಥೆಯಾದ ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆಯನ್ನು ಅವಲಂಭಿಸಿದ್ದು, ರಾಜ್ಯ ವ್ಯಾಪಿ ಜನರು ಈ ಸಂಸ್ಥೆಗೆ ಚಿಕಿತ್ಸೆಗಾಗಿ ಬರುವುದರಿಂದ ಒತ್ತಡವನ್ನು ನಿವಾರಿಸಲು ಸರ್ಕಾರ ಆಯ್ದ ಕೆಲ ಜಿಲ್ಲಾ ಮಟ್ಟದಲ್ಲಿ ಈ ಖಾಯಿಲೆಗೆ ಚಿಕಿತ್ಸೆ ನೀಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ನಿರ್ಣಯಿಸಿ ಆದರಲ್ಲಿ ತುಮಕೂರು ಹಾಗೂ ಮೈಸೂರಿನಲ್ಲಿ ಕ್ಯಾನ್ಸರ್ ಖಾಯಿಲೆಗೆ ಪೂರ್ಣ ಪ್ರಮಾಣದಲ್ಲಿ ಚಿಕಿತ್ಸೆ ನೀಡಲು ಬೇಕಾದಂತಹ ಎಲ್ಲಾ ಸೌಕರ್ಯಗಳನ್ನು ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಸೂಕ್ತ ಕಟ್ಟಡಗಳೊಂದಿಗೆ ಸಜ್ಜುಗೊಳಿಸಿದ್ದರೂ ಸಹ ಇಲ್ಲಿಯವರೆವಿಗೂ ಈ ಶಾಖೆಗಳನ್ನು ಪ್ರಾರಂಭಿಸಲು ಯಾವ ಕಾರಣಕ್ಕಾಗಿ ವಿಳಂಬ ಮಾಡಲಾಗುತ್ತಿದೆ; | ಪೆರಿಫೆರಲ್ ಕ್ಯಾನ್ಸರ್ ಕೇಂದ್ರ, ತುಮಕೂರು ಮತ್ತು ಮೈಸೂರು ಇಲ್ಲಿ ಕಟ್ಟಡ ಕಾಮಗಾರಿಗಳು ಪೂರ್ಣಗೊಂಡಿದ್ದು, ಪಿಸಿಸಿ-ತುಮಕೂರಿಗೆ ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 70 ಕೆಯುಎಂ 2023, ದಿನಾಂಕ:27.01.2026ರ ರಲ್ಲಿ ಒಟ್ಟು 53, ವೈದ್ಯಕೀಯ ಮತ್ತು ವೈದ್ಯಕೀಯೇತರ ಹುದ್ದೆಗಳನ್ನು ಸೃಜಿಸಿ ಆದೇಶಿಸಲಾಗಿದೆ. ಹಾಗೆಯೇ, ಪಿಸಿಸಿ- ಮೈಸೂರಿಗೆ ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 53 ಕೆಯುಎ 2025(1), ದಿನಾಂಕ:27.01.2026 ರಲ್ಲಿ ಒಟ್ಟು 53 ವೈದ್ಯಕೀಯ ಮತ್ತು ವೈದ್ಯಕೀಯೇತರ ಹುದ್ದೆಗಳನ್ನು ಸೃಜಿಸಿ ಆದೇಶಿಸಲಾಗಿದೆ. ಸದರಿ ಆದೇಶಗಳಲ್ಲಿನ ಹುದ್ದೆಗಳಲ್ಲಿ ಖಾಯಂ ಆಗಿ ಭರ್ತಿ ಮಾಡುವ ಹುದ್ದೆಗಳಿಗೆ ಸಂಬಂಧಿಸಿದಂತೆ, ಶೀಘ್ರದಲ್ಲಿ ಮೀಸಲಾತಿ ರೋಸ್ಟರ್ ಬಿಂದುಗಳನ್ನು ದೃಢೀಕರಿಸುವ ಬಗ್ಗೆ ಸಮಾಜ ಕಲ್ಯಾಣ ಇಲಾಖೆಗೆ ಪ್ರಸ್ತಾವನೆಯನ್ನು ಕಿದ್ವಾಯಿ ಸಂಸ್ಥೆಯಿಂದ ಸಲ್ಲಿಸಲಾಗುತ್ತಿದ್ದು, ಸಮಾಜ ಕಲ್ಯಾಣ ಇಲಾಖೆ ಅನುಮೋದನೆ ಪಡೆದು ನೇಮಕಾತಿ ಅಧಿಸೂಚನೆ ಹೊರಡಿಸಲು ಕ್ರಮವಹಿಸಲಾಗುವುದು.<br><br>ಮುಂದುವರೆದಂತೆ, ಪೆರಿಫೆರಲ್ ಕ್ಯಾನ್ಸರ್ ಕೇಂದ್ರ ತುಮಕೂರು ಮತ್ತು ಮೈಸೂರು ಇಲ್ಲಿಗೆ ಅಗತ್ಯವಿರುವ ವೈದ್ಯಕೀಯ ಉಪಕರಣಗಳನ್ನು ಖರೀದಿಸಲು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ಮೂಲಕ ಟೆಂಡರ್ ಪ್ರಕ್ರಿಯೆಯಲ್ಲಿ ರೂ.8873,00,000/- (ಎಂಬತ್ತೆಂಟು ಕೋಟಿ ಎಪ್ಪತ್ತೂರು ಲಕ್ಷ |

| | | |
|---|---|---|
| | | ರೂಪಾಯಿಗಳು ಮಾತ್ರ) ಮೊತ್ತದ ಉಪಕರಣಗಳ ಖರೀದಿಗೆ LOI (Letter of Intent)ನ್ನು ನೀಡಲಾಗಿದೆ. |
| (ಆ) | ಈ ರೀತಿ ವಿಳಂಬವಾದಲ್ಲಿ, ಸರ್ಕಾರದ ಉದ್ದೇಶ ವ್ಯರ್ಥವಾಗುವುದಿಲ್ಲವೇ; ಹಾಗಾಗಿ, ಬಡ-ಮಧ್ಯಮ ವರ್ಗದ ಕ್ಯಾನ್ಸರ್ ಪೀಡಿತ ರೋಗಿಗಳ ಹಿತದೃಷ್ಟಿಯಿಂದ ತುಮಕೂರು ಹಾಗೂ ಮೈಸೂರಿನಲ್ಲಿ ಅರ್ಬುದ ಖಾಯಿಲೆಗೆ ಚಿಕಿತ್ಸೆ ನೀಡಲು ತುರ್ತಾಗಿ ಸರ್ಕಾರ ಕ್ರಮ ವಹಿಸುತ್ತದೆಯೆ? | ಪೆರಿಫೆರಲ್ ಕ್ಯಾನ್ಸರ್ ಕೇಂದ್ರ, ತುಮಕೂರು ಮತ್ತು ಮೈಸೂರು ಇಲ್ಲಿ ಕಟ್ಟಡ ಕಾಮಗಾರಿಗಳು ಪೂರ್ಣಗೊಂಡಿದ್ದು, ವೈದ್ಯಕೀಯ ಮತ್ತು ವೈದ್ಯಕೀಯೇತರ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಹಾಗೂ ವೈದ್ಯಕೀಯ ಉಪಕರಣಗಳ ಖರೀದಿ ಹಾಗೂ ಅಳವಡಿಕೆ ಕಾರ್ಯ ಪೂರ್ಣಗೊಂಡ ನಂತರ ಶೀಘ್ರದಲ್ಲಿ ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆ ಒದಗಿಸಲು ಕ್ರಮವಹಿಸಲಾಗುವುದು. ಪ್ರಸ್ತುತ ಸದರಿ ರೋಗಿಗಳಿಗೆ ಕೆ.ಎಂ.ಐ.ಓ ಸಂಸ್ಥೆ ಬೆಂಗಳೂರು ಇಲ್ಲಿ ಚಿಕಿತ್ಸೆಯನ್ನು ಒದಗಿಸಲಾಗುತ್ತಿದೆ.<br><br>ಹಾಗೆಯೇ, ಪ್ರಸ್ತುತ ಮೈಸೂರು ಭಾಗದ ಕ್ಯಾನ್ಸರ್ ರೋಗಿಗಳಿಗೆ ಕೀಮೋಥೆರಪಿ ಚಿಕಿತ್ಸೆಯನ್ನು ಮೈಸೂರು ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಡೇ-ಕೇರ್ ವ್ಯವಸ್ಥೆಯಲ್ಲಿ ಕಿದ್ವಾಯಿ ಸಂಸ್ಥೆಯ ವತಿಯಿಂದ ಒದಗಿಸಲಾಗುತ್ತಿದೆ. |

**ಸಂಖ್ಯೆ:** ಎಂಇಡಿ 68 ಕೆಯುಎಂ 2026

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.